BANGALORE
THE IT CAPITAL OF INDIA

KEONICS
ISO 9001 : 2015

# ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ
# Karnataka State Electronics Development Corporation Limited
(A Government of Karnataka Enterprise)
CIN No. U75112KA1976SGC003055)

**ಸಂಖ್ಯೆ: ಕೆಎಸ್ಇಡಿಸಿ/ ವಿನಿ /ಬ್ಯಾಲಾಹಿಂಪ/2024-25 ದಿನಾಂಕ: 25-02-2025**

## ಅಧಿಕೃತ ಜ್ಞಾಪನ

**ವಿಷಯ : ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿ., (ಕಿಯೋನಿಕ್ಸ್), ಬೆಂಗಳೂರು ಸಂಸ್ಥೆಯಲ್ಲಿ ಖಾಲಿ ಇರುವ 10 ಬ್ಯಾಕ್ ಲಾಗ್ ಹುದ್ದೆಗಳನ್ನು ನೇಮಕ ಮಾಡುವ ಸಂಬಂಧ ದಿನಾಂಕ : 23.06.2023 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಹೊರಡಿಸಿದ್ದ ಅಧಿಸೂಚನೆಯನ್ನು ಭಾಗಶಃ (10 ಬ್ಯಾಕ್ ಲಾಗ್ ಹುದ್ದೆಗಳಿಗೆ ಸೀಮಿತವಾಗುವಂತೆ) ಹಿಂಪಡೆಯುವ ಬಗ್ಗೆ.**

ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿ., (ಕಿಯೋನಿಕ್ಸ್), ಬೆಂಗಳೂರು ಸಂಸ್ಥೆಯಲ್ಲಿ ಖಾಲಿ ಇರುವ 10 ಬ್ಯಾಕ್ ಲಾಗ್ ಹುದ್ದೆಗಳನ್ನು ನೇಮಕ ಮಾಡುವ ಸಂಬಂಧ ದಿ: 23-06-2023 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಅಧಿಸೂಚನೆ ಹೊರಡಿಸಲಾಗಿತ್ತು.

ಆದರೆ, ಮೇಲೆ ತಿಳಿಸಿದ ಅಧಿಸೂಚನೆಗೆ ಆಕ್ಷೇಪಣೆ ಬಂದ ಕಾರಣ , ಸದರಿ ಆಕ್ಷೇಪಣೆಯ ಬಗ್ಗೆ ಕಿಯೋನಿಕ್ಸ್ ಸಂಸ್ಥೆಯಲ್ಲಿ ನಡೆದ 208 ನೇ ಆಡಳಿತ ಮಂಡಳಿಯ ಸಭೆಯಲ್ಲಿ ಚರ್ಚಿಸಲಾಗಿರುತ್ತದೆ. ಮುಂದುವರಿದು ಆಡಳಿತ ಮಂಡಳಿಯು , ಕಿಯೋನಿಕ್ಸ್ ಸಂಸ್ಥೆಯಲ್ಲಿ ಖಾಲಿ ಇರುವ 10 ಬ್ಯಾಕ್ ಲಾಗ್ ಹುದ್ದೆಗಳನ್ನು ನೇಮಕ ಮಾಡುವ ಸಂಬಂಧ ದಿನಾಂಕ: 23-06-2023 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಹೊರಡಿಸಿದ ಅಧಿಸೂಚನೆಯನ್ನು ಹಿಂಪಡೆದು ಹಾಗೂ ಹೊಸ ಅಧಿಸೂಚನೆಯನ್ನು ಹೊರಡಿಸಲು, ಆಡಳಿತ ಮಂಡಳಿಯು ಕಿಯೋನಿಕ್ಸ್ ಸಂಸ್ಥೆಯ ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರಿಗೆ ಅಧಿಕಾರವನ್ನು ನೀಡಿರುತ್ತದೆ.

ಮುಂದುವರಿದು, ಸಮಾಜ ಕಲ್ಯಾಣ ಇಲಾಖೆಯವರಿಗೆ ಬ್ಯಾಕ್ ಲಾಗ್ ಹುದ್ದೆಗಳನ್ನು ಯಾವ ರೀತಿಯಲ್ಲಿ ಭರ್ತಿ ಮಾಡಬೇಕೆಂದು ಸ್ಪಷ್ಟೀಕರಣ ಕೇಳಿ ಪತ್ರ ಬರೆಯಲಾಗಿತ್ತು.

ತದನಂತರ ಸಮಾಜ ಕಲ್ಯಾಣ ಇಲಾಖೆಯು, Special rules ಅನ್ವಯ ಬ್ಯಾಕ್ ಲಾಗ್ ಹುದ್ದೆಗಳಿಗೆ ***" ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 13 ಎಸ್‌ಬಿಸಿ ಎಸ್‌ಟಿಸಿ 2004, ದಿನಾಂಕ: 22.11.2001 ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ) ಗಳಿಗೆ ಸೇರಿದ ವ್ಯಕ್ತಿಗಳಿಗೆ ಮೀಸಲಾದ ಭರ್ತಿ ಮಾಡದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಹೊರಡಿಸಲಾಗಿರುವ ವಿಶೇಷ ನೇಮಕಾತಿ ನಿಯಮಗಳನ್ವಯ ಸದರಿ ಬ್ಯಾಕ್ ಲಾಗ್ ಹುದ್ದೆಗಳ ನೇಮಕಾತಿಗೆ ಕ್ರಮವಹಿಸಬೇಕಿರುತ್ತದೆ"*** *ಹಾಗೂ* ಪರೀಕ್ಷೆಯ ಅಗತ್ಯವಿರುವುದಿಲ್ಲವೆಂದು ಸ್ಪಷ್ಟೀಕರಣ ನೀಡಿ, ದಿನಾಂಕ : 04.01.2025 ರಂದು ಕಿಯೋನಿಕ್ಸ್ ಸಂಸ್ಥೆಗೆ ಪತ್ರದ ಮುಖಾಂತರ ತಿಳಿಸಿರುತ್ತಾರೆ .

ಈ ಹಿನ್ನೆಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ 10 ಬ್ಯಾಕ್ ಲಾಗ್ ಹುದ್ದೆಗಳಿಗೆ ದಿನಾಂಕ : 23.06.2023 ರಂದು ಹೊರಡಿಸಲಾಗಿದ್ದ ಅಧಿಸೂಚನೆಯನ್ನು ಭಾಗಶಃ (10 ಬ್ಯಾಕ್ ಲಾಗ್ ಹುದ್ದೆಗಳಿಗೆ ಸೀಮಿತವಾಗುವಂತೆ) ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.

*******

**ವಿಶೇಷ ಸೂಚನೆ** : ಮುಂದಿನ ದಿನಗಳಲ್ಲಿ 10 ಬ್ಯಾಕ್ ಲಾಗ್ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಹೊಸ ಅಧಿಸೂಚನೆಯನ್ನು ಹೊರಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

(ಮಾನ್ಯ ವ್ಯವಸ್ಥಾಪಕ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ)

Ravi... 25/2/2025

ನಿರ್ದೇಶಕರು (ನಿರ್ವಹಣೆ)